ಮಟ್ಟದ ಆಸ್ಪತ್ರೆಗಳಿಗೆ ರೂ. – 1 ಲಕ್ಷ ಹಾಗೂ ಆಸ್ಪತ್ರೆಯ Users Funds ನಲ್ಲೂ ಸಹ ಅವಶ್ಯಕತೆಗನುಗುಣವಾಗಿ ಔಷಧಿಗಳನ್ನು ಸ್ಥಳೀಯವಾಗಿ ಖರೀದಿಸಲಾಗುತ್ತದೆ.

ಅಲ್ಲದೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಒಳಪಡುವ ಆರೋಗ್ಯ ಸಂಸ್ಥೆಗಳ ಆಡಳಿತ ವೈದ್ಯಾಧಿಕಾರಿಗಳು ಔಷಧಿಗಳ ಕೊರತೆಯಿರುವುದಾಗಿ ಪ್ರಸ್ತಾವನೆ ಸಲ್ಲಿಸಿದಲ್ಲಿ ಅಗತ್ಯತೆಗೆ ತಕ್ಕಂತೆ ಹೆಚ್ಚುವರಿಯಾಗಿ ಔಷಧಿಗಳನ್ನು ಸರ್ಕಾರಿ ಔಷಧಿ ಮಳಿಗೆ ಅನುದಾನದಲ್ಲಿ ಪೂರೈಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಊ) ಈ ಆಸ್ಪತ್ರೆಯ ಯೂಸರ್ಸ್ ಚಾರ್ಜ್ ನಿಧಿಯಲ್ಲಿ ಅವಶ್ಯಕವಿರುವ ಬೆಡ್‌ಶೀಟ್‌ಗಳನ್ನು ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ, ಶಿವಮೊಗ್ಗ ಇವರಿಂದ ಖರೀದಿಸಲಾಗಿದೆ. ಹಾಗೂ ಹಾಸಿಗೆಗಳನ್ನು ದುರಸ್ತಿಪಡಿಸಲಾಗಿದೆ. ಈ ಆಸ್ಪತ್ರೆಯಲ್ಲಿ ನಾನ್ ಕ್ಲಿನಿಕಲ್ ಗುತ್ತಿಗೆದಾರರಿಂದ ಬೆಡ್‌ಶೀಟ್‌ಗಳನ್ನು ಸ್ವಚ್ಛಗೊಳಿಸಲಾಗುತ್ತಿದೆ.

ಊ) ಉದ್ಭವಿಸುವುದಿಲ್ಲ.

95. ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. (ಗೌರಿಬಿದನೂರು) :– ಮಾನ್ಯ ಕಾರ್ಮಿಕ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಗೌರಿಬಿದನೂರು ತಾಲ್ಲೂಕಿನಲ್ಲಿ ಅತೀ ಬಡವರು, ಹಿಂದುಳಿದ ವರ್ಗದವರು ಅಧಿಕವಾಗಿದ್ದು, ನಿರುದ್ಯೋಗಿಗಳ ಸಂಖ್ಯೆಯು ಅಧಿಕವಾಗಿರುವುದರಿಂದ ಶ್ರೀ ನಂಜುಂಡಪ್ಪ ವರದಿಯ ಪ್ರಕಾರ ಈ ತಾಲ್ಲೂಕನ್ನು ಹಿಂದುಳಿದ ತಾಲ್ಲೂಕೆಂದು ಘೋಷಿಸಿರುವುದು ನಿಜವೇ ?

ಆ) ಹಾಗಿದ್ದಲ್ಲಿ, ಈ ತಾಲ್ಲೂಕಿನಲ್ಲಿ ಕಳೆದ ವರ್ಷದಿಂದ ಅನೇಕ ಕಾರ್ಖಾನೆಗಳು ಸ್ಥಾಪನೆಯಾಗಿದ್ದರೂ ಈ ಭಾಗಕ್ಕೆ ಐ.ಟಿ.ಐ. ತರಬೇತಿ ಕೇಂದ್ರವನ್ನು ಸ್ಥಾಪನೆ ಮಾಡದಿರಲು ಕಾರಣವೇನು ?

ಇ) ಹಾಗಾದರೆ, ಪ್ರಸಕ್ತ ಆರ್ಥಿಕ ವರ್ಷದಲ್ಲಿ ಐ.ಟಿ.ಐ. ತರಬೇತಿ ಕೇಂದ್ರವನ್ನು ಪ್ರಾರಂಭಿಸಲು ಸರ್ಕಾರವು ಮಂಜೂರಾತಿ ನೀಡುವುದರಿಂದ ಈ ಭಾಗದ ನಿರುದ್ಯೋಗಿ ಯುವಕರಿಗೆ ತರಬೇತಿ ಪಡೆದು ಉದ್ಯೋಗ ಪಡೆಯುವಂತಾಗಲು ಕ್ರಮ ಕೈಗೊಳ್ಳಲಾಗುವುದೇ ?

ಶ್ರೀ ಬಿ. ಎನ್. ಬಚ್ಚೇಗೌಡ (ಕಾರ್ಮಿಕ ಸಚಿವರು):–

ಅ) ನಿಜ

ಆ) ಗೌರಿಬಿದನೂರಿನಲ್ಲಿ 1989 ರಿಂದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯು ಕಾರ್ಯನಿರ್ವಹಿಸುತ್ತಿದೆ, ಒಟ್ಟು ಎರಡು ವೃತ್ತಿಗಳಲ್ಲಿ 120 ವಿದ್ಯಾರ್ಥಿಗಳಿಗೆ ತರಬೇತಿ ನೀಡಲಾಗುತ್ತಿದೆ. ಈ ಸಾಲಿನಲ್ಲಿ ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಈ ಸಂಸ್ಥೆಯನ್ನು ಉನ್ನತೀಕರಿಸಲು ಪರಿಗಣಿಸಲಾಗಿದೆ. ಇದರಿಂದ 240 ವಿದ್ಯಾರ್ಥಿಗಳಿಗೆ ತರಬೇತಿ ನೀಡಲು ಹೆಚ್ಚಿನ ಅವಕಾಶ ಕಲ್ಪಿಸಲಾಗಿದೆ.

ಇ) ಈ ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

212. ಶ್ರೀ ಶ್ರೀನಿವಾಸ್ ಎಂ. :– ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಮಂಡ್ಯ ಜಿಲ್ಲಾ ಆಸ್ಪತ್ರೆಯ ಅಭಿವೃದ್ಧಿ ಮತ್ತು ಅವಶ್ಯಕ ಕಟ್ಟಡ ನಿರ್ಮಾಣ ಯಾವ ಹಂತದಲ್ಲಿದೆ ?

ಆ) ಆಸ್ಪತ್ರೆ ಮತ್ತು ಕಾಲೇಜು ಕಟ್ಟಡಗಳ ಕಾಮಗಾರಿಗಳು ಯಾವ ಹಂತದಲ್ಲಿದೆ ?

ಇ) ಈ ಆಸ್ಪತ್ರೆಗೆ ಪೂರಕವಾಗಿರುವ ವೈದ್ಯಕೀಯ ಕಾಲೇಜನ್ನು ಸುವ್ಯವಸ್ಥಿತಗೊಳಿಸಲು ಸರ್ಕಾರ ಮಂಜೂರು ಮಾಡಿದ ಹಣದ ಮೊತ್ತ ಎಷ್ಟು ? ಕಾಮಗಾರಿಗಳು ವಿಳಂಬವಾಗಲು ಕಾರಣಗಳೇನು ?

ಈ) ಈ ಆಸ್ಪತ್ರೆ ಮತ್ತು ಕಾಲೇಜುಗಳ ಕಟ್ಟಡಗಳನ್ನು ಕೂಡಲೇ ಪೂರ್ಣಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

ಶ್ರೀ ಬಿ. ಶ್ರೀರಾಮುಲು (ವೈದ್ಯಕೀಯ ಶಿಕ್ಷಣ ಸಚಿವರು):–

ಅ) ಜಿಲ್ಲಾ ಆಸ್ಪತ್ರೆಯ ಹೊಸ ಕಟ್ಟಡ ನಿರ್ಮಾಣ ಕಾರ್ಯಕ್ರಮವಿರುವುದಿಲ್ಲ.

ಆ) ಕಾಲೇಜಿನ ಕಟ್ಟಡದ 1ನೇ ಹಂತದ ಕಾಮಗಾರಿ ಪೂರ್ಣಗೊಂಡಿದೆ, 2ನೇ ಹಂತದ ಕಾಮಗಾರಿ ಪ್ರಗತಿಯಲ್ಲಿದೆ. ಆಸ್ಪತ್ರೆ ಕಟ್ಟಡ ಕಾಮಗಾರಿ ಕಾರ್ಯಕ್ರಮವಿರುವುದಿಲ್ಲ.

ಇ) ರೂ. 58.29 ಕೋಟಿ, ಆಡಳಿತಾತ್ಮಕ ಕಾರಣಗಳು